ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 18ನೇ ಫೆಬ್ರವರಿ, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

I. ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) ಅವರು:

ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಮಾರ್ಚ್, 2018ಕ್ಕೆ ಕೊನೆಗೊಂಡ ವರ್ಷದ ಸಾರ್ವಜನಿಕ ವಲಯದ ಮೇಲಿನ ವರದಿಯನ್ನು (2019ನೇ ವರ್ಷದ ವರದಿ ಸಂಖ್ಯೆ:5) ಸಭೆಯ ಮುಂದಿಡುವುದು.

II. ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ.

2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"ದಿನಾಂಕ 17ನೇ ಫೆಬ್ರವರಿ, 2020ರ ಸೋಮವಾರದಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರವರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"

ಎಂದು **ಶ್ರೀ ಎ.ಎಸ್. ಪಾಟೀಲ್(ನಡಹಳ್ಳಿ)** ಅವರು ಸೂಚಿಸುವುದು;

ಶ್ರೀ ಹೆಚ್. ಹಾಲಪ್ಪ ಹರತಾಳ್ ಅವರು ಅನುಮೋದಿಸುವುದು.

3. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2020ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2020ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. ಡಾ: ಅಶ್ವತ್ಥನಾರಾಯಣ ಸಿ.ಎನ್. (ಮಾನ್ಯ ಉಪ ಮುಖ್ಯಮಂತ್ರಿಗಳು) ಅವರು:-

ಅ) 2020ನೇ ಸಾಲಿನ ಕರ್ನಾಟಕ ನಾವಿನ್ಯತಾ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:-

ಅ) 2020ನೇ ಸಾಲಿನ ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

6. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:-

ಅ) 2020ನೇ ಸಾಲಿನ ಕರ್ನಾಟಕ ರಾಜಭಾಷಾ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
